# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ ಶಿವಾಜಿನಗರ ಉಪವಿಭಾಗ ಹಲಸೂರು ಕೆರೆರಸ್ತೆ, ಬೆಂಗಳೂರು-42**

---

ಸಂಖ್ಯೆ:ಸ.ಇಂ/ವಾ-92/ವಾರ್ಡ್‌ಸಭೆ/85/2022-23 ದಿನಾಂಕ:20-08-2022

## ವಾರ್ಡ್-92 ರ ವಾರ್ಡ್ ಸಭೆಯ ನಡವಳಿ

ದಿನಾಂಕ: 20-08-2022 ರಂದು ಶಿವಾಜಿನಗರ ಉಪ ವಿಭಾಗ ವಾರ್ಡ್-92-ಶಿವಾಜಿನಗರ ವಾರ್ಡ್ ಕಛೇರಿಯಲ್ಲಿ ಶ್ರೀ.ಡಿ.ಮೂರ್ತಿ, ಸಹಾಯಕ ಕಾರ್ಯಪಾಲಕ ಅಭಿಯಂತರರು (ದೊಮ್ಮಲೂರು ಉಪ ವಿಭಾಗ) ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳ.

**ಹಾಜರಿದ್ದವರು:**

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಪದನಾಮ / ಇಲಾಖೆ |
|---|---|---|
| 1 | ಶ್ರೀ.ಡಿ.ಮೂರ್ತಿ, | ಸಹಾಯಕ ಕಾರ್ಯಪಾಲಕ ಅಭಿಯಂತರರು (ದೊಮ್ಮಲೂರು ಉಪ ವಿಭಾಗ) ನೋಡಲ್ ಅಧಿಕಾರಿ |
| 2 | ಶ್ರೀಮತಿ ಡಾ|| ಶ್ರೀದೇವಿ | ಪ್ರಾಥಮಿಕ ಆರೋಗ್ಯ ಕೇಂದ್ರ (ಶಿವಾಜಿನಗರ) |
| 3 | ಶ್ರೀ ಹೆಚ್.ಎಂ ರಂಗನಾಥ್, | ಸ ಅ ಹಾಗೂ ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ ಸಂಖ್ಯೆ:92 |
| 4 | ಶ್ರೀ ಜಾವೀದ್ | ಸಕಾನಿಅ(ಘ.ತ್ಯಾ.ನಿ) ಶಿವಾಜಿನಗರ ವಿಭಾಗ(ಪ್ರಭಾರ) |
| 5 | ಶ್ರೀ.ವಿ.ವೆಂಕಟೇಶ್, | ಹಿರಿಯ ಆರೋಗ್ಯ ಪರಿವೀಕ್ಷಕರು |
| 6 | ಶ್ರೀ.ರಾಜೇಶ್, | ಸ.ಅ(ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 7 | ಶ್ರೀ.ರಮೇಶ್ | ವಾರ್ಡ್ ದಫೇದಾರ್ |
| 8 | ಶ್ರೀ ತ್ಯಾಗರಾಜ್, | ಕಂದಾಯ ಪರಿವೀಕ್ಷಕರು |

**ಮಾನ್ಯ ನೋಡಲ್ ಅಧಿಕಾರಿರವರು ಸ್ವಾಗತದೊಂದಿಗೆ ಅಧಿಕಾರಿಗಳ / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಬಿಸಲಾಯಿತು.**

**ಕೋವಿಡ್-19 ಮತ್ತು ಮಂಕಿ ಪಾಕ್ಸ್ ಸಾಂಕ್ರಾಮಿಕ ರೋಗದ ಬಗ್ಗೆ:** ಶಿವಾಜಿನಗರ ಉಪ ವಿಭಾಗದ ವಾರ್ಡ್ ಸಂಖ್ಯೆ:92ರ ಘನತ್ಯಾಜ್ಯ ವಿಲೇವಾರಿ ಸಿಬ್ಬಂದಿವರ್ಗದವರಿಗೆ ಅವರುಗಳ ಕರ್ತವ್ಯ ಮತ್ತು ಕೋವಿಡ್-19 ಮತ್ತು ಮಂಕಿ ಫಾಕ್ಸ್ ಬಗ್ಗೆ ಜನ ಜಾಗ್ರತಿ ಮೂಡಿಸಲು ತಿಳಿಸಿರುತ್ತಾರೆ. ಹಾಗೂ ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ತಿಳುವಳಿಕೆ ಮೂಡಿಸಿ 3ನೇ ಬೂಸ್ಟರ್ ಡೋಸ್ ಲಸಿಕೆಯನ್ನು ಪಡೆಯಲು ಸೂಚಿಸಲಾಯಿತು. ಲಸಿಕೆ ಪಡೆಯಲು ಹಾಗೂ ಆರೋಗ್ಯ ಸಿಬ್ಬಂದಿಗಳನ್ನು ಘನತ್ಯಾಜ್ಯ ವಿಲೇವಾರಿಯ ಎಲ್ಲಾ ಸಿಬ್ಬಂದಿವರ್ಗದವರಿಗೂ ಕಸ/ತ್ಯಾಜ್ಯ ವಸ್ತುಗಳ ಬೇರ್ಪಡಿಸುವಿಕೆ ಮತ್ತು ಸಮರ್ಪಕ ವಿಲೇವಾರಿ ಬಗ್ಗೆ ಅನುಷ್ಟಾನಗೊಳಸಲು ನಿರ್ದೇಶನ ನೀಡಲಾಯಿತು.

- ಬಿಡಬ್ಲ್ಯೂಎಸ್‌ಎಸ್‌ಬಿ ಯಿಂದ ಸುಲ್ತಾನ್ ಗುಂಟ ಮುಖ್ಯ ರಸ್ತೆ, ಯು.ಜಿ.ಡಿ ಲೈನ್ ಹಾಕುತ್ತಿದ್ದು, ಸದರಿ ಮುಖ್ಯ ರಸ್ತೆಯಲ್ಲಿ ಸಾರ್ವಜನಿಕರಿಗೆ ಹಾಗೂ ವಾಹನ ಸವಾರರು ಸಂಚಾರಕ್ಕೆ ತೊಂದರೆಯಾಗುತ್ತಿದ್ದು ಮತ್ತು ಅಗೆದ ಮಣ್ಣು ರಸ್ತೆ ಪಕ್ಕದ ಚರಂಡಿಗೆ ಬಿದ್ದು ನೀರು ಸರಾಗವಾಗಿ ಹೊಗದೆ ಚರಂಡಿಯಲ್ಲಿ ನೀರು ನಿಂತು ವಾಸನೆಯಿಂದ ಕೂಡಿದ್ದು ಮತ್ತು ಇದರಿಂದ ಸೊಳ್ಳೆಗಳು ಹೆಚ್ಚಾಗುತ್ತಿರುವುದಾಗಿ ಸಾರ್ವಜನಿಕರಿಂದ ದೂರು ಬಂದಿರುವ ಕಾರಣ ಕೂಡಲೇ ಸಂಬಂಧಿಸಿದ ಸ್ಮಾರ್ಟ್ ಸಿಟಿ ಕಾಮಗಾರಿ ವಿಭಾಗದವರಿಗೆ ಕ್ರಮ ಜರೂಗಿಸಲು ತಿಳಿಸಿರುತ್ತಾರೆ.

**(ಸಹಾಯಕ ಕಾರ್ಯಪಾಲಕ ಅಭಿಯಂತರರು ಸ್ಮಾರ್ಟ್ ಸಿಟಿ (ಶಿವಾಜಿನಗರ)**

**(ಮ.ತಿ.ನೋ)**

- ವಾರ್ಡ್ ಸಂ-92 ನೆಹರೂಪುರಂನಲ್ಲಿ ಚರಂಡಿ ಮತ್ತು ಡೆಕ್ ಸ್ಲ್ಯಾಬ್ ಬ್ಲಾಕ್ ಆಗಿ ರಸ್ತೆಗೆ ಚರಂಡಿ ನೀರು ಹರಿಯುತ್ತಿರುವ ಬಗ್ಗೆ ಸಾರ್ವಜನಿಕರು ಮತ್ತು ವಾಹನ ಸಾವರರಿಗೆ ತೊಂದರೆಯಾಗುತ್ತಿರುವುದು ಕಂಡುಬಂದಿದ್ದು ತುರ್ತಾಗಿ ಮುಂದಿನ ಕ್ರಮ ಜರೂಗಿಸಲು ಸಹಾಯಕ ಅಭಿಯಂತರರಿಗೆ ನೋಡಲ್ ಅಧಿಕಾರಿರವರು ಸೂಚಿಸಿರುತ್ತಾರೆ.

**(ಸಹಾಯಕ ಕಾರ್ಯಪಾಲಕ ಅಭಿಯಂತರರು (ಶಿವಾಜಿನಗರ)**

- ಬೆಂಗಳೂರು ಮೆಟ್ರೋ ರೈಲು ಕಾರ್ಪೋರೇಷನ್ ಲಿ.ಟೆ ರವರು ಸಿಲ್ಟ್ ಅನ್ನು ಡ್ರೈನ್‌ಗೆ ಬಿಡುವುದರಿಂದ ಶಿವಾಜಿರಸ್ತೆ  ಚರಂಡಿಯಲ್ಲಿ ಹೂಳು ತುಂಬಿ ಹೋಗಿರುತ್ತದೆ ಆದ್ದರಿಂದ ಶಿವಾಜಿರಸ್ತೆಯಲ್ಲಿ ಮಳೆ ಬಂದಾಗ ಪದೆ ಪದೇ ನೀರು ಸಂಗ್ರಹವಾಗಿ ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ತುಂಬ ತೊಂದರೆಯಾಗುತ್ತಿರುವ ಕಾರಣ ಬೆಂಗಳೂರು ಮೇಟ್ರೋ ಕಾರ್ಪೋರೇಷನ್ ಲಿ.ಟೆ ರವರಿಗೆ ಅದನ್ನು ಸರಿಯಾದ ರೀತಿ ನಿರ್ವಹಿಸಲು ಸಂಬಂಧಿಸಿದವರಿಗೆ ಸೂಚಿಸಲು ತಿಳಿಸಿರುತ್ತಾರೆ.
**(ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ (ಶಿವಾಜಿನಗರ) ಹಾಗೂ ಸಹಾಯಕ ಅಭಿಯಂತರರು (ಶಿವಾಜಿನಗರ)**

- ಗಾರ್ಬೆಜ್ ಗುತ್ತಿಗೆದಾರರು ಕಸವಿಲೇವಾರಿ ಸಮರ್ಪಕವಾಗಿ ನಿರ್ವಹಿಸದೆ ಇರುವ ಕಾರಣ ಸಾರ್ವಜನಿಕರಿಂದ ದೂರುಗಳು ಬರುತ್ತಿದ್ದು, ಕಸ ವಿಲೇವಾರಿ ಸರಿಯಾದ ಸಮಯಕ್ಕೆ ಮಾಡಲು ಸೂಕ್ತ ಕ್ರಮ ಕೈಗೊಳ್ಳಬೇಕಾಗಿ ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ) ನಿರ್ವಹಣೆ ರವರಿಗೆ ತಿಳಸಲು ಸೂಚಿಸಿರುತ್ತಾರೆ.

**ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ ಶಿವಾಜಿನಗರ**)

- ನೋಡಲ್ ಅಧಿಕಾರಿ ರವರು ಮಾತನಾಡುತ್ತ OFC Cable ಅಳವಡಿಕೆಯನ್ನು ಮಾನ್ಯ ವಲಯ ಆಯುಕ್ತರ ಆದೇಶದಂತೆ ಜುಲೈ ತಿಂಗಳಿನಿಂದ ಅಕ್ಟೋಬರ್ ತಿಂಗಳವರೆಗೆ ಸಂಪೂರ್ಣವಾಗಿ ಸ್ಥಗೀತಗೊಳಿಸಲು ಅಂದರೆ ಯಾವುದೇ ರೋಡ್ ಕಟಿಂಗ್‌ಗಳು ಅನುಮತಿ ನೀಡದಂತೆ ಹಾಗೂ OFC Cable ಅಗೆತಕ್ಕೆ ಅವಕಾಶ ನೀಡದಿರಲು ತಿಳಿಸಿರುತ್ತಾರೆ.

**(ಸಹಾಯಕ ಕಾರ್ಯಪಾಲಕ ಅಭಿಯಂತರರು (ಶಿವಾಜಿನಗರ)**

- ಮಳೆಯಿಂದ ಹಾನಿಗೊಳಗಾಗುವ ಪ್ರದೇಶವನ್ನು ತುರ್ತಾಗಿ ಸರಿಪಡಿಸಲು ಕ್ರಮವಹಿಸಲು ಮಾನ್ಯ ಮುಖ್ಯ ಆಯುಕ್ತರ ಆದೇಶದಂತೆ ವಾರ್ಡ್‌ಗೆ ರೂ.40.00 ಲಕ್ಷಗಳ ಅನುದಾನದಡಿ ತೆಗೆದುಕೊಂಡಿರುವ ಕಾಮಗಾರಿಗಳನ್ನು ತುರ್ತಾಗಿ ಟೆಂಡರ್ ಪ್ರಕ್ರಿಯೇ ಪೂರ್ಣಗೊಳಿಸಿ ಅರ್ಹ ಗುತ್ತಿಗೆದಾರರಿಗೆ ಕಾರ್ಯಾದೇಶ ನೀಡಿ ಶೀಘ್ರವಾಗಿ ಕಾಮಗಾರಿಗಳನ್ನು ಕೈಗೊಂಡು ಮಳೆಯಿಂದ ಹಾನಿಯಾಗುವುದನ್ನು ತಪ್ಪಿಸಲು ಸಂಬಂಧಿಸಿದ ಸಕ್ಷಮ ಪ್ರಾಧಿಕಾರದ ಗಮನ ಸೇಳೆಯಲು ಸಹಾಯಕ ಅಭಿಯಂತರರಿಗೆ  ಅಧ್ಯಕ್ಷರು ಸಹಾಯಕ ಅಭಿಯಂತರರಿಗೆ ನಿರ್ದೇಶನವನ್ನು 16-07-2022 ರ ಸಭೆಯಲ್ಲಿ  ಸೂಚಿಸಿದ್ದ ಮೇರೆಗೆ ಶಿವಾಜಿನಗರ ವಾರ್ಡ್‌ನ ನಾಲ್ಕು ಕಾಮಗಾರಿಗಳ ಟೆಂಡರ್ ಪ್ರಕ್ರೀಯೇ ಪೂರ್ಣಗೊಂಡು ಗುತ್ತಿಗೆದಾರರ ಟೆಂಡರ್ ಅನುಮೋದನೆ ಆಗಿರುತ್ತದೆ. ಆದರೆ ಜಾಬ್ ಸಂಖ್ಯೆಯನ್ನು ಕ್ರಿಯೇಟ್ ಮಾಡಲು ಐ.ಎಫ್.ಎಂ.ಎಸ್ ನಲ್ಲಿ ಅಪ್‌ಲೋಡ್ ಮಾಡಲು ಪ್ರಕ್ರಿಯೇ ಕೈಗೊಂಡಾಗ ಬಡ್‌ಜೆಟ್ ಕೋಡ್ ಅನುದಾನ ಹಂಚಿಕೆಯನ್ನು ಐ.ಎಫ್.ಎಂ.ಎಸ್ ನಲ್ಲಿ ಕೇಳುತ್ತದೆ. ಆದ್ದರಿಂದ ಸಂಬಂಧಿಸಿದ ತಕ್ಷಮ ಪ್ರಾಧಿಕಾರದ ಗಮನ ಸೆಳೆಯಲು ಈ ಹಿಂದಿನ ಸಭೆಯಲ್ಲಿ ತಿಳಿಸಿದ್ದು ಆದರೆ ಈ ವರೆಗೂ ಯಾವುದೇ ಕ್ರಮವಾಗಿಲ್ಲದಿರುವುದು ತಿಳಿದುಬಂದಿದ್ದು, ಕೂಡಲೇ ಈ ಬಗ್ಗೆ ಕ್ರಮವಹಿಸಲು ಸಂಬಂಧಿಸಿದ ಸಕ್ಷಮ ಪ್ರಾಧೀಕಾರಾದ ಅಧಿಕಾರಿಗಳ ಗಮನ ಸೆಳೆಯಲು ಅಧ್ಯಕ್ಷರು ವಾರ್ಡ್ ಕಮಿಟಿ ಕಾರ್ಯದರ್ಶಿರವರಿಗೆ ಸೂಚಿಸಿರುತ್ತಾರೆ.

(ಪು.ತಿ.ನೋ)

- ವಾರ್ಡ್ ಪ್ರದೇಶದ ರಸ್ತೆಗಳಲ್ಲಿ ಮತ್ತು ಪಾದಚಾರಿ ರಸ್ತೆಗಳಲ್ಲಿ ಮಣ್ಣು ಮತ್ತು ಅನುಪಯುಕ್ತ ಡೆಬ್ರೀಸ್‌ನ್ನು ರಾತ್ರಿ ಹೊತ್ತಿನಲ್ಲಿ ಸುರಿಯುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ಹಾಗೂ ಪಾದಚಾರಿಗಳಿಗೆ ಒಡಾಡಲು ತುಂಬಾ ತೊಂದರೆಯುಂಟಾಗುತ್ತಿರುತ್ತದೆ, ಆದುದರಿಂದ ಸದರಿ ಮಣ್ಣು ಮತ್ತು ಅನುಪಯುಕ್ತ ಡೆಬ್ರೀಸನ್ನು ತೆರವುಗೊಳಿಸಲು ಅವಶ್ಯ ಕ್ರಮ ಕೈಗೊಳ್ಳಲು ಈ ಹಿಂದಿನ ಸಭೆಯಲ್ಲಿ ಕೋರಿದ್ದ ಮೇರೆಗೆ ಸಿಲ್ಟ್ & ಟ್ರಾಕ್ಟರ್ ಮೂಲಕ ಫುಟ್‌ಪಾತ್ ಮೇಲಿರುವ ಮತ್ತು ರಸ್ತೆಯ ಬದಿಯಲ್ಲಿರುವ ಡೆಬ್ರಿಸ್ ತೆರವುಗೊಳಿಸುವ ಕೆಲಸವನ್ನು ಕೈಗೊಂಡಿರುತ್ತದೆ ಎಂದು ಸಹಾಯಕ ಅಭಿಯಂತರರು ತಿಳಿಸಿರುತ್ತಾರೆ.

**(ಸಹಾಯಕ ಕಾರ್ಯಪಾಲಕ ಅಭಿಯಂತರರು (ಶಿವಾಜಿನಗರ)**

- ಅಂತಿಮವಾಗಿ ಅಧ್ಯಕ್ಷರು ಮಾತನಾಡಿ ಸಕಾದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಂಡು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು ಹಾಗು

- ಹಾಜರಿದ್ದ ಸಾರ್ವಜನಿಕರಿಗೆ ಕಸ ವಿಲೇವಾರಿ ಬಗ್ಗೆ ಆದಷ್ಟು ಗಮನವಹಿಸಿ ಸಹಕರಿಸಿದಲ್ಲಿ ದಿನನಿತ್ಯದ ಕಸ ವಿಲೇವಾರಿ ಸಮಯದಲ್ಲಿ ಸಮರ್ಪಕವಾಗಿ ನಿರ್ವಹಿಸಲು ಗುತ್ತಿಗೆದಾರರು ಸಹಾಯವಾಗುತ್ತದೆ.

ಕಾರ್ಯದರ್ಶಿಯವರು ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಅಂತಿಮವಾಗಿ ಅಧ್ಯಕ್ಷರು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಂಡು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

ನೋಡಲ್ ಅಧಿಕಾರಿರವರ ಸೂಚನೆಗಳಂತೆ ನಡವಳಗಳನ್ನು ತಯಾರಿಸಿ ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡಲು ಸೂಚಿಸಿರುತ್ತಾರೆ.

Sd/-

**ಕಾರ್ಯದರ್ಶಿಗಳು**
**ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ ಸಂ:92 ಶಿವಾಜಿನಗರ,**

**ಪ್ರತಿಯನ್ನು:**

1. **ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರ ಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.**
2. **ಮಾನ್ಯ ವಲಯ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.**
3. **ಮಾನ್ಯ ಜಂಟಿ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.**
4. **ಉಪ ಆಯುಕ್ತರು(ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.**
5. **ಕಾರ್ಯಪಾಲಕ ಅಭಿಯಂತರರು (ಶಿವಾಜಿನಗರ) ವಿಭಾಗ ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.**